ಪುಟ-2
ಕ್ರಾಂತಿಯಕಿದಿ
ಭಾನುವಾರ
18 ಜುಲೈ 2021
ಕಾಯಕಯೋಗಿ
KAYAKAYOGI-MORNING DAILY
ಕನ್ನಡ ದಿನಪತ್ರಿಕೆ

ಬಕ್ರೀದ್ ಹಬ್ಬ: ಪೂರ್ವಭಾವಿ ಸಭೆ

ಚಾಮರಾಜನಗರ : ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಶನಿವಾರದಂದು ಬಕ್ರೀದ್ ಹಬ್ಬದ ಹಿನ್ನಲೆಯಲ್ಲಿ ಪೂರ್ವಭಾವಿ ಸಭೆ ನಡೆಯಿತು.

ವೃತ್ತ ನಿರೀಕ್ಷಕ ಬಿ. ಪುಟ್ಟಸ್ವಾಮಿ ಅವರು ಮಾತನಾಡಿ, ಮುಸ್ಲಿಂ ಬಾಂಧವರು ಬಕ್ರೀದ್ ಹಬ್ಬವನ್ನು ಸರ್ಕಾರ ನೀಡಿರುವ ಮಾರ್ಗಸೂಚಿಯಂತೆ ಕೊರೊನಾ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಆಚರಿಸುವಂತೆ ಮನವಿ ಮಾಡಿದರು.

ಜಿಲ್ಲಾ ವಕ್ಫ್ ಮಂಡಳಿ ಅಧ್ಯಕ್ಷ ಅಪ್ಪರ್ ಪಾಷ ಮಾತನಾಡಿ, ಕೋವಿಡ್ ನಿಯಮವನ್ನು ಅನುಸರಿಸಿ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸಿ ಬಕ್ರೀದ್ ಹಬ್ಬವನ್ನು ಆಚರಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಗ್ರಾಮಾಂತರ ಠಾಣೆ ಪಿಎಸ್ಐ ಹನುಮಂತ ಉಪ್ಪಾರ್, ಮದೀನ ಮಸೀದಿಯ ಅಧ್ಯಕ್ಷ ನಯೀಮುಲ್ ಹಕ್, ಕಾರ್ಯದರ್ಶಿ ವಸೀಂಉಲ್ಲಾ, ಕಿರಗಸೂರು, ಅಮಚಿವಾಡಿ, ನಗರದ ಮುಸ್ಲಿಂ ಮುಖಂಡರು ಭಾಗವಹಿಸಿದ್ದರು.

ವಿಶ್ವನಾಥ್ ಚಾಮರಾಜನಗರ ವರದಿಗಾರ

ಕಾಯಕಯೋಗಿ ದಿನಪತ್ರಿಕೆಯ ಚಾಮರಾಜನಗರ ಜಿಲ್ಲಾ ವರದಿಗಾರರಾಗಿ ಬಿ.ಆರ್.ವಿಶ್ವನಾಥ್ ಅವರನ್ನು ನೇಮಕಗೊಳಿಸಲಾಗಿದೆ.
ನಮ್ಮೆಲ್ಲಾ ಓದುಗರು, ಅಧಿಕಾರಿವರ್ಗ, ಜನಪ್ರತಿನಿಧಿಗಳು, ಸಂಘ ಸಂಸ್ಥೆ ಮುಖಂಡರು, ಸುದ್ದಿ ಹಾಗೂ ಜಾಹೀರಾತುಗಳಿಗೆ ವಿಶ್ವನಾಥ್ ಅವರನ್ನು ಸಂಪರ್ಕಿಸಲು ಕೋರಲಾಗಿದೆ.

ವಿಶ್ವನಾಥ್ ಬಿ.ಆರ್.
ಮೊ : 9986638679 –ಸಂಪಾದಕಿ.

ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸಕಲ ಸಿದ್ಧತೆ : ಡಿಸಿ ಡಾ. ಎಂ.ಆರ್. ರವಿ

ಚಾಮರಾಜನಗರ : ಜಿಲ್ಲೆಯಲ್ಲಿ ಇದೇ ಜುಲೈ 19 ಹಾಗೂ 22 ರಂದು ಎಸ್.ಎಸ್.ಎಲ್.ಸಿ ಪರೀಕ್ಷೆಯು ಜಿಲ್ಲೆಯ 85 ಕೇಂದ್ರಗಳಲ್ಲಿ ನಡೆಯಲಿದ್ದು ಇದಕ್ಕಾಗಿ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅವರು ತಿಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾಧಿಕಾರಿಯವರು ಸುದ್ದಿಗೋಷ್ಠಿ ನಡೆಸಿ ಎಸ್.ಎಸ್.ಎಲ್.ಸಿ ಪರೀಕ್ಷೆ ಸಿದ್ಧತೆ ಸಂಬಂಧ ಕೈಗೊಂಡಿರುವ ಕ್ರಮಗಳ ಕುರಿತು ವಿವರಿಸಿದರು.

ಜುಲೈ 19ರಂದು ಕೋರ್ ವಿಷಯಗಳಾದ ಗಣಿತ, ವಿಜ್ಞಾನ, ಸಮಾಜ ಹಾಗೂ 22ರಂದು ಕನ್ನಡ, ಇಂಗ್ಲೀಷ್, ಹಿಂದಿ ಭಾಷೆ ಪರೀಕ್ಷೆಗಳು ನಡೆಯಲಿವೆ. ಈ ಬಾರಿ ಪರೀಕ್ಷೆಯ ಸ್ವರೂಪ ಬದಲಾಗಿದೆ. ಬಹು ಆಯ್ಕೆ ಮಾದರಿಯ ಪ್ರಶ್ನೆಗಳು ಇರಲಿವೆ. ವಿದ್ಯಾರ್ಥಿಗಳಿಗೆ ಉತ್ತರಿಸಲು ಓಎಂಆರ್ ಶೀಟ್ ಗಳನ್ನು ನೀಡಲಾಗುತ್ತದೆ ಎಂದರು.

ಒಟ್ಟು 12,189 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಇವರಲ್ಲಿ 6,440 ಗಂಡು ಮಕ್ಕಳು, 5,749 ಹೆಣ್ಣು ಮಕ್ಕಳು ಪರೀಕ್ಷೆ ಬರೆಯಲಿದ್ದಾರೆ. ಈ ಬಾರಿ ವಿಶೇಷ ಆಗತ್ವವುಳ್ಳ 115 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗುತ್ತಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 85 ಪರೀಕ್ಷಾ ಕೇಂದ್ರಗಳಿವೆ. ಚಾಮರಾಜನಗರ ತಾಲೂಕಿನಲ್ಲಿ 27, ಗುಂಡ್ಲುಪೇಟೆ 21, ಹನೂರು 16, ಕೊಳ್ಳೇಗಾಲ 14, ಯಳಂದೂರು ತಾಲೂಕಿನ 7 ಪರೀಕ್ಷಾ ಕೇಂದ್ರಗಳು ಇವೆ. ಪ್ರತೀ ತಾಲೂಕಿನಲ್ಲಿ 2 ಪರೀಕ್ಷಾ ಕೇಂದ್ರಗಳಂತೆ ಒಟ್ಟು 10 ಕಾಯ್ದಿರಿಸಿದ ಪರೀಕ್ಷಾ ಕೇಂದ್ರಗಳು ಸಹ ಇವೆ.

ವಲಸೆಯ ನಿಮಿತ್ತ 71 ವಿದ್ಯಾರ್ಥಿಗಳು ತಮಗೆ ಹತ್ತಿರದ ತಾಲೂಕು ಪರೀಕ್ಷಾ ಕೇಂದ್ರಗಳನ್ನು ಆಯ್ಕೆ ಮಾಡಿಕೊಂಡಿದ್ದಾರೆ. ಸುಮಾರು 100 ವಿದ್ಯಾರ್ಥಿಗಳಿಗೆ 1 ಪರೀಕ್ಷಾ ಕೇಂದ್ರ ಸ್ಥಾಪಿಸಲಾಗಿದ್ದು, ಪ್ರತಿ ಕೊಠಡಿಯಲ್ಲಿ 12 ವಿದ್ಯಾರ್ಥಿಗಳಿಗೆ ಆಸನದ ವ್ಯವಸ್ಥೆ ಮಾಡಲಾಗಿದೆ. ಪ್ರತಿ ಡೆಸ್ಕಗೆ ಒಬ್ಬ ವಿದ್ಯಾರ್ಥಿಯಂತೆ ಅಭ್ಯರ್ಥಿಗಳ ನಡುವೆ 6 ಅಡಿ ಸಾಮಾಜಿಕ ಅಂತರ ಕಾಪಾಡಲಾಗುವುದು. ಪ್ರತೀ ಪರೀಕ್ಷಾ ಕೇಂದ್ರದಲ್ಲಿ 2 ವಿಶೇಷ ಕೊಠಡಿಗಳು ಇರಲಿವೆ. ಪ್ರತೀ ಕೇಂದ್ರದಲ್ಲಿ ಕೆಮ್ಮು, ಜ್ವರ, ನೆಗಡಿ ಲಕ್ಷಣವಿರುವ ಮಕ್ಕಳು

ಪರೀಕ್ಷೆ ಬರೆಯಲು ವಿಶೇಷ ಕೊಠಡಿಗಳಲ್ಲಿ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಕೋವಿಡ್ ಪಾಸಿಟಿವ್ ವಿದ್ಯಾರ್ಥಿ ಇಚ್ಛೆಪಟ್ಟಲ್ಲಿ ಪೋಷಕರ ಒಪ್ಪಿಗೆ ಹಾಗೂ ವೈದ್ಯಕೀಯ ಸಲಹೆ ಮೇರೆಗೆ ಕೋವಿಡ್ ಕೇರ್ ಸೆಂಟರ್‌ನಲ್ಲಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗುವುದು. ಕೋವಿಡ್ ಪಾಸಿಟಿವ್ ಕಾರಣದಿಂದ ಪರೀಕ್ಷೆಗೆ ಗೈರು ಹಾಜರಾಗುವ ವಿದ್ಯಾರ್ಥಿಗಳ ಮುಂದಿನ ಪರೀಕ್ಷೆಯ ಹಾಜರಾತಿಯನ್ನು ಪ್ರಥಮ ಪ್ರಯತ್ನವೆಂದೆ ಪರಿಗಣಿಸಲಾಗುತ್ತದೆ. ಈ ಬಗ್ಗೆ ವಿದ್ಯಾರ್ಥಿಗಳು ಹಾಗೂ ಪೋಷಕರು ಯಾವುದೇ ಆತಂಕ ಗೊಂದಲಕ್ಕೆ ಒಳಗಾಗಬಾರದು ಎಂದರು.

ಒಟ್ಟು 2,176 ಅಧಿಕಾರಿಗಳು ಹಾಗೂ ಸಿಬ್ಬಂದಿ ಪರೀಕ್ಷಾ ಕಾರ್ಯಕ್ಕೆ ನಿಯೋಜಿತರಾಗಿದ್ದಾರೆ. ಈ ಎಲ್ಲರೂ ಕೋವಿಡ್ ಲಸಿಕೆ ಹಾಕಿಸಿಕೊಂಡಿದ್ದಾರೆ. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಅಗತ್ಯವಾದ ಸ್ಯಾನಿಟೈಸರ್ ಸರಬರಾಜು ಮಾಡಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಥರ್ಮಲ್ ಸ್ಕ್ಯಾನಿಂಗ್, ಮಾಸ್ಕ್ ಧಾರಣೆ, ಸಾಮಾಜಿಕ ಅಂತರ ಕಡ್ಡಾಯ ಮಾಡಲಾಗಿದೆ. ಇದರ ಅನುಷ್ಠಾನಕ್ಕಾಗಿ ಪ್ರತ್ಯೇಕ ಅಧಿಕಾರಿಯನ್ನು ನೇಮಿಸಲಾಗಿದೆ ಎಂದರು.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ವತಿಯಿಂದ ವಿದ್ಯಾರ್ಥಿಗಳಿಗೆ 13 ಸಾವಿರ ಮಾಸ್ಕ್‌ಗಳನ್ನು ನೀಡಲಾಗಿದೆ. ರೋಟರಿ ಸಂಸ್ಥೆ ವತಿಯಿಂದ 12 ಸಾವಿರ ಎನ್-95 ಮಾಸ್ಕ್ ಗಳನ್ನು ವಿತರಿಸಲಾಗಿದೆ. ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ 18 ವರ್ಷ ಮೇಲ್ಪಟ್ಟ ಹಾಗೂ ಲಸಿಕೆ ಪಡೆದಿರುವ 170 ಸ್ವಯಂಸೇವಕರನ್ನು ಪರೀಕ್ಷಾ ಕೇಂದ್ರಗಳಿಗೆ ನಿಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಸಕಾಲದಲ್ಲಿ ಪರೀಕ್ಷೆ ಹಾಜರಾಗಲು ವಿದ್ಯಾರ್ಥಿಗಳಿಗೆ ಸಾರಿಗೆ ಸಂಸ್ಥೆಯಿಂದ ಬಸ್ ಸೌಕರ್ಯ ಕಲ್ಪಿಸಲಾಗಿದೆ. ಯಾವುದೇ ವಿದ್ಯಾರ್ಥಿ ವಾಹನ ಸೌಲಭ್ಯದ ಕೊರತೆಯ ಕಾರಣದಿಂದ ಪರೀಕ್ಷೆಗೆ ಗೈರು ಹಾಜರಾಗದಂತೆ ನೋಡಿಕೊಳ್ಳಲು ಸೂಚಿಸಲಾಗಿದೆ. ಕೋವಿಡ್ ಕುರಿತ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಲಾಗುತ್ತಿದೆ. ಪರೀಕ್ಷೆ ಬಗ್ಗೆ ಸುಳ್ಳು ವದಂತಿಗಳನ್ನು ಹರಡುವ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದರು. ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಎಸ್.ಟಿ. ಜವರೇಗೌಡ, ಶಿಕ್ಷಣಾಧಿಕಾರಿ ಮಂಜುನಾಥ್ ಗೋಷ್ಠಿಯಲ್ಲಿದ್ದರು.

ಲಿಂಗತ್ವ ಅಲ್ಪ ಸಂಖ್ಯಾತರು ಮುಖ್ಯವಾಹಿನಿಗೆ ಬನ್ನಿ: ನ್ಯಾಯಾಧೀಶ ಸದಾಶಿವ ಎಸ್.ಸುಲ್ತಾನಪುರಿ ಕರೆ

ಚಾಮರಾಜನಗರ : ಲಿಂಗತ್ವ ಅಲ್ಪ ಸಂಖ್ಯಾತರರು ಉತ್ತಮ ಶಿಕ್ಷಣ ಪಡೆದು ಸಮಾಜದ ಮುಖ್ಯವಾಹಿನಿಗೆ ಬರಬೇಕು. ಆರ್ಥಿಕವಾಗಿ, ಸಬಲರಾಗಿ ಸ್ವಾವಲಂಬಿಗಳಾಗಬೇಕು ಎಂದು ಜಿಲ್ಲಾ ಮತ್ತು ಸೆಷನ್ ನ್ಯಾಯಾಧೀಶರಾದ ಸದಾಶಿವ ಎಸ್. ಸುಲ್ತಾನಪುರಿ ಅವರು ತಿಳಿಸಿದರು.

ನಗರದ ಜಿಲ್ಲಾ ನ್ಯಾಯಾಲಯ ಆವರಣದಲ್ಲಿರುವ ವ್ಯಾಜ್ಯ ಪೂರ್ವ ಪರ್ಯಾಯ ಪರಿಹಾರ ಕೇಂದ್ರದಲ್ಲಿಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಸಮತಾ ಸೊಸೈಟಿ, ಇವರ ಸಹಯೋಗದಲ್ಲಿ ಆಯೋಜಿಸಿದ್ದ ಲಿಂಗತ್ವ ಹಾಗೂ ಸಾಮಾಜಿಕ ನ್ಯಾಯದ ಬಗ್ಗೆ ಕಾನೂನು ಅರಿವು ಕಾರ್ಯಕ್ರಮ ಹಾಗೂ ಲಿಂಗತ್ವ ಅಲ್ಪ ಸಂಖ್ಯಾತರಿಗೆ ಸಹಾಯಧನ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಲಿಂಗತ್ವ ಅಲ್ಪ ಸಂಖ್ಯಾತರು ಹಲವಾರು ಸಮಸ್ಯೆ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಅವರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ತಡೆಗಟ್ಟಬೇಕಾದರೆ ಶಿಕ್ಷಣ ಪಡೆಯುವುದು ಬಹಳ ಅಗತ್ಯ. ಸಮಸ್ಯೆಗಳ ನಡುವೆಯೂ ಕೆಲವರು ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು ಪಡೆದಿರುವುದು ಸಂತೋಷಕರವಾಗಿದೆ ಎಂದರು.

ಲಿಂಗತ್ವ ಅಲ್ಪ ಸಂಖ್ಯಾತರ ಹಿತ ರಕ್ಷಣೆಗೆ ಇತ್ತೀಚೆಗೆ ಕಾನೂನು ಬಂದಿದೆ. ಮಹಿಳೆಯರ ಮೇಲೆ ಅತ್ಯಾಚಾರ ದೌರ್ಜನ್ಯ ನಡೆದರೆ ಮಾತ್ರ ಶಿಕ್ಷೆ ಇರುತ್ತಿತ್ತು. ಆದರೆ ಈಗಿನ ಕಾನೂನಿನಲ್ಲಿ ಪುರುಷರು ಮತ್ತು ಲಿಂಗತ್ವ ಅಲ್ಪ ಸಂಖ್ಯಾತರ ಮೇಲೆ ದೌರ್ಜನ್ಯ ನಡೆದರೆ ಶಿಕ್ಷೆ ನೀಡಬಹುದಾಗಿದೆ ಎಂದು ಜಿಲ್ಲಾ ಮತ್ತು ಸೆಷನ್ ನ್ಯಾಯಾಧೀಶರಾದ ಸದಾಶಿವ ಎಸ್. ಸುಲ್ತಾನಪುರಿ ಅವರು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರಾದ ಎಂ. ಶ್ರೀಧರ್ ಅವರು ಮಾತನಾಡಿ ಲಿಂಗತ್ವ ಅಲ್ಪ ಸಂಖ್ಯಾತರು ಪುರುಷರು ಹಾಗೂ ಮಹಿಳೆಯರಷ್ಟೇ ಶಕ್ತಿ ಸಾಮರ್ಥ್ಯ ಹೊಂದಿದ್ದಾರೆ. ಸಮಾಜದಲ್ಲಿ ಇವರನ್ನು ದೂರ ಇಡುತ್ತಿರುವುದು ನೋವಿನ ಸಂಗತಿ. ಆದರೆ ಕಾನೂನಿನಲ್ಲಿ ಇವರಿಗೆ ಸ್ಥಾನಮಾನಗಳು, ಭದ್ರತೆ ಒದಗಿಸಲಾಗಿದೆ. ಸಮಾಜದಲ್ಲಿ ಎಲ್ಲ ವರ್ಗದ ಜನರಿಗೆ ಸಿಗುವ ಸೌಕರ್ಯಗಳು ಲಿಂಗತ್ವ ಅಲ್ಪ ಸಂಖ್ಯಾತರಿಗೆ ಸಿಗುವಂತಾಗಬೇಕು ಎಂದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಉಮ್ಮತ್ತೂರು ಇಂದುಶೇಖರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಲಿಂಗತ್ವ ಅಲ್ಪ ಸಂಖ್ಯಾತರಿಗೂ ಹೃದಯ ವಂತಿಕೆ, ಮಾನವೀಯ ಮೌಲ್ಯಗಳಿವೆ. ಆದರೆ ಸಮಾಜ ಅವರನ್ನು ನೋಡುವ ದೃಷ್ಟಿಕೋನ ಬದಲಾಗಬೇಕಿದೆ. ಲಿಂಗತ್ವ ಅಲ್ಪ ಸಂಖ್ಯಾತರು ಸಮಾಜದಲ್ಲಿ ಎದುರಿಸುತ್ತಿರುವ ಸಮಸ್ಯೆಗಳನ್ನು ಮನಗಾಣಲು, ಇತರರಂತೆ ಜೀವನ ನಡೆಸಲು ಅವರ ಸಮಗ್ರ ಅಭಿವೃದ್ಧಿಗಾಗಿ ನಿಗಮ ರಚಿಸಬೇಕು ಎಂದರು.

ಮೈಸೂರಿನ ನಿವೃತ್ತ ಕೆ.ಎ.ಎಸ್. ಅಧಿಕಾರಿ ಜಿ.ಎನ್. ಬಸವರಾಜು ರವರು ಚಾಮರಾಜನಗರದ ಐವರು ಲಿಂಗತ್ವ ಅಲ್ಪ ಸಂಖ್ಯಾತರರಿಗೆ ತಲಾ 10 ಸಾವಿರ ರೂ ಗಳಂತೆ ಒಟ್ಟು ರೂ. 50 ಸಾವಿರ ರೂಗಳನ್ನು ವೈಯಕ್ತಿಕ ಧನ ಸಹಾಯ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಗಣಪತಿ ಜಿ ಬಾದಾಮಿ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಚಂಪಕ, ಪ್ರಧಾನ ಸಿವಿಲ್ ನ್ಯಾಯಾಧೀಶ ಮಹಮ್ಮದ್ ರೋಷನ್ ಷಾ, ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಎಸ್.ವಿ. ಸ್ವಿತಾ, ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಎಸ್. ಮಂಜು, ಸಮತಾ ಸೊಸೈಟಿ ವ್ಯವಸ್ಥಾಪಕರಾದ ದೀಪಬುದ್ಧೆ, ಸಾಧನ ಸಂಸ್ಥೆಯ ನಿರ್ದೇಶಕರಾದ ಟಿ.ಜೆ. ಸುರೇಶ್ ವಕೀಲರಾದ ಬಿ. ಮಂಜು ಉಪಸ್ಥಿತರಿದ್ದರು.

ಸರಳತೆಗೆ ಹೆಸರುವಾಸಿ ನಂಜುಂಡೇಗೌಡರು: ಪ್ರಥಮ ಪುಣ್ಯ ಸ್ಮರಣೆ ಕಾರ್ಯಕ್ರಮ

ಪಾಂಡವಪುರ : ಸರಳ, ಸಜ್ಜನಿಕೆ ಹಾಗೂ ಪ್ರಾಮಾಣಿಕೆ ವ್ಯಕ್ತಿತ್ವದಿಂದ ಎಲ್ಲರಿಂದಲೂ ಪ್ರಶಂಸೆಗೆ ಪಾತ್ರರಾಗಿದ್ದ ಪಿ ಎಸ್‌ಎಸ್‌ಕೆ ಮಾಜಿ ಅಧ್ಯಕ್ಷ ನಂಜುಂಡೇಗೌಡರ ಆದರ್ಶಗಳು ಎಲ್ಲರಿಗೂ ಮಾದರಿಯಾಗಬೇಕು ಎಂದು ಮಾಜಿ ಪ್ರಧಾನ ಇ.ಎಸ್.ಸೀತಾರಾಮಯ್ಯ ಹೇಳಿದರು.

ಪಟ್ಟಣದ ಸಾಯಿಮಂದಿರದಲ್ಲಿ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ಏರ್ಪಡಿಸಿದ್ದ ನಂಜುಂಡೇಗೌಡರ ಪ್ರಥಮ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕಸಬಾ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಸಾಧಾರಣ ಗುಮಾಸ್ತರಾಗಿದ್ದ ನಂಜುಂಡೇಗೌಡರ ಪ್ರಾಮಾಣಿಕ ವ್ಯಕ್ತಿತ್ವ ಹಾಗೂ ಜನಪರ ಕಾಳಜಿಯಿಂದ ಪುರಸಭೆಗೆ 4 ಬಾರಿ ಚುನಾಯಿತರಾಗಿ 2 ಬಾರಿ ಅಧ್ಯಕ್ಷರಾಗಿದ್ದರು. ಅಲ್ಲದೇ, ಪಿಎಸ್‌ಎಸ್ ಕಾರ್ಯನಿಯ ಅಧ್ಯಕ್ಷರಾಗಿಯೂ ಕೆಲಸ ಮಾಡುವ ಅವಕಾಶ ತಾನಾಗಿಯೇ ಒದಗಿ ಬಂತು. ಇವೆಲ್ಲವೂ ಕೇವಲ ನಂಜುಂಡೇಗೌಡರ ಪ್ರಾಮಾಣಿಕತೆಗೆ ಸಿಕ್ಕ ಪ್ರತಿಫಲಗಳು. ಜನಪ್ರತಿನಿಧಿಗಳು ನಂಜುಂಡೇಗೌಡರ ಆದರ್ಶಗಳನ್ನು ಮಾದರಿಯಾಗಿರಿಸಿ ಸಾರ್ವಜನಿಕ ಜೀವನದಲ್ಲಿ ಮುನ್ನಡೆಯಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಇ.ಎಸ್.ಸೀತಾರಾಮಯ್ಯ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪ ಪ್ರಾಂಶುಪಾಲ ಮಹದೇವಪ್ಪ, ಉಪನ್ಯಾಸಕ ಚಿಲುವೇ ಗೌಡ, ಹಾರೋಬಳ್ಳಿ ಲಕ್ಷ್ಮೀಗೌಡ, ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ ಎಚ್. ಆರ್.ಧನ್ಯಕುಮಾರ್, ಶ್ರೀಪತಂಜಲಿ ಯೋಗ ಶಿಕ್ಷಣ ಸಮಿತಿ ಅಧ್ಯಕ್ಷ ಜಯರಾಮೇಗೌಡ, ಹೊಸಕೋಟೆ ವಿಜಯ ಕುಮಾರ್, ಹಾರೋಬಳ್ಳಿ ಚಿಂದ್ರು, ಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ರಾಮಚಂದ್ರು ಇತರರು ಇದ್ದರು.

ಗೋಮಾಳ-ನಗರ ಪ್ರದೇಶದ ಹತ್ತಿರದ ಜಮೀನುಗಳಿಗೆ ಸಾಗುವಳಿ ಪತ್ರ ವಿತರಣೆ ಇಲ್ಲ: ಪುಟ್ಟರಂಗಶೆಟ್ಟಿ

ಚಾಮರಾಜನಗರ : ಸಕ್ರಮ ಸಮಿತಿಗೆ ಅರ್ಜಿ ಸಲ್ಲಿಸಿರುವ ರೈತರು ಗೋಮಾಳ ಹಾಗೂ ನಗರ ಪ್ರದೇಶ ವ್ಯಾಪ್ತಿ 5 ಕಿ.ಮೀ ಸುತ್ತಳತೆಯಲ್ಲಿ ಸಾಗುವಳಿ ಮಾಡುತ್ತಿದ್ದರೆ ಅಂಥವರಿಗೆ ಸಾಗುವಳಿ ಪತ್ರವನ್ನು ಮಂಜೂರು ಮಾಡುವುದಿಲ್ಲ ಎಂದು ಶಾಸಕರೂ ಆದ ಸಕ್ರಮ ಸಮಿತಿಯ ಅಧ್ಯಕ್ಷರಾದ ಸಿ. ಪುಟ್ಟರಂಗಶೆಟ್ಟಿ ತಿಳಿಸಿದ್ದಾರೆ

ನಗರದ ತಾಲೂಕು ಕಛೇರಿ ಸಭಾಂಗಣದಲ್ಲಿ ನಡೆದ ಸಾಗುವಳಿ ಸಕ್ರಮೀಕರಣ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ, ಅರ್ಹ 9 ಮಂದಿ ರೈತರಿಗೆ ಸಾಗುವಳಿ ಪತ್ರ ವಿತರಿಸಿ ಅವರು ಮಾತನಾಡಿದರು.

ಗೋಮಾಳಗಳು ಜಾನುವಾರುಗಳ ಮೇವು ಅಗತ್ಯವಾಗಿದೆ. ಅಲ್ಲದೇ ಪಟ್ಟಣ ಪ್ರದೇಶದಿಂದ 5 ಕಿ.ಮೀ. ವ್ಯಾಪ್ತಿಯಲ್ಲಿ ಸರ್ಕಾರಿ ಜಮೀನುಗಳಲ್ಲಿ ವ್ಯವಸಾಯ ಮಾಡುತ್ತಿದ್ದರೆ ಅಂಥ ಜಮೀನುಗಳನ್ನು ಸಕ್ರಮಗೊಳಿಸಲು ಕಾನೂನಿನಲ್ಲಿ ಅವಕಾಶವಿಲ್ಲ. ಹೀಗಾಗಿ ರೈತರು ಇಂಥ ಜಮೀನುಗಳನ್ನು ಹೊರತು ಪಡಿಸಿ ಇತರೇ ಸರ್ಕಾರಿ ಜಮೀನುಗಳಲ್ಲಿ ವ್ಯವಸಾಯ ಮಾಡುತ್ತಿದ್ದು, ಅರ್ಜಿ ಸಲ್ಲಿಸಿದ್ದರೆ ಅಂಥವರಿಗೆ ಸಾಗುವಳಿ ಪತ್ರ ನೀಡಲು ನಮ್ಮ ಸಮಿತಿ ಬದ್ಧವಾಗಿದೆ ಎಂದರು.

ಈಗಾಗಲೇ ಸಲ್ಲಿಸಿರುವ ಅರ್ಜಿಗಳನ್ನು



ಚಾಮರಾಜನಗರ ತಾಲೂಕು ಕಚೇರಿ ಸಭಾಂಗಣದಲ್ಲಿ ನಡೆದ ಸಾಗುವಳಿ ಸಕ್ರಮೀಕರಣ ಸಮಿತಿ ಸಭೆಯಲ್ಲಿ ಶಾಸಕ ಪುಟ್ಟರಂಗಶೆಟ್ಟಿ 9 ಮಂದಿ ರೈತರಿಗೆ ಸಾಗುವಳಿ ಪತ್ರ ವಿತರಿಸಿದರು. ಸಮಿತಿ ಸದಸ್ಯರಾದ ಶೇಖರಪ್ಪ, ಮಹೇಶ್ವರಸ್ವಿದ್ದೇಗೌಡ, ವೀರಭದ್ರಸ್ವಾಮಿ, ಶಿರಸ್ತೇದಾರ್ ಜಾಬೀನಾತಾಜ್, ರಾಜಸ್ವ ನಿರೀಕ್ಷಕರಾದ ಆನಂದ್ ದೂಳಪ್ಪ, ಲಿಂಗರಾಜುಮೂರ್ತಿ, ಚಿಕ್ಕ ಅಂಕಶೆಟ್ಟಿ, ಗುಮಾಸ್ತರಾದ ಜಯರಾಜ್ ಇತರರು ಇದ್ದಾರೆ. ಚಿತ್ರ : ರೇಣುಕೇಶ್

ಪರಿಶೀಲನೆ ಮಾಡುತ್ತಿದ್ದು, ಕಂದಾಯ, ಸರ್ವೇ ಇಲಾಖೆ ವರದಿ ನಂತರ ಕ್ರಮಕೈಗೊಳ್ಳಲಾಗುವುದು. ಚಾಮರಾಜನಗರ ವಿಧಾನಸಭಾ ಕ್ಷೇತ್ರವ್ಯಾಪ್ತಿಯಲ್ಲಿ ಬಹಳ ವರ್ಷದಿಂದ ಸಾಗುವಳಿ ಮಾಡುತ್ತಿದ್ದ ರೈತರಿಗೆ ಸಕ್ರಮೀಕರಣ ಸಮಿತಿಯ ಸರ